ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು

ಕೃಷಿ ಹವಾಮಾನ ವಿಭಾಗ, ಜಿ.ಕೆ.ವಿ.ಕೆ, ಬೆಂಗಳೂರು–65

ಮಾಯಸಂದ್ರ ಹೋಬಳಿಯ ಕೃಷಿ ಹವಾಮಾನ ಮುನ್ಸೂಚನೆ

ದಿನಾಂಕ:22.04.16

ಈ ವಾರದ ಮುನ್ಸೂಚನೆ (23.4.16 to 27.4.16 ವರೆಗೆ)

ನಿಯತಾಂಕಗಳು	23.04.16	24.04.16	25.04.16	26.04.16	27.04.16
ಮಳೆ (ಮಿ ಮಿ)	0	0	0	0	0
ಗರಿಷ್ಠ ಉಷ್ಣಾಂಶ(ಡಿ.ಸೆ.)	37	38	38	38	38
ಕನಿಷ್ಠ ಉಷ್ಣಾಂಶ (ಡಿ.ಸೆ.)	22	21	23	23	24
ಮೋಡ (ಪ್ರಮಾಣ)	2	1	2	1	3
ಅರ್ದ್ರತೆ ೭.೨೦ ಬೆ (ಶೇ)	92	88	50	62	69
ಅರ್ದ್ರತೆ ೨.೨೦ ಮ (ಶೇ)	20	15	16	13	22
ಗಾಳಿಯ ವೇಗ (ಕಿ.ಮಿ/ಗಂಟೆಗೆ)	1	11	8	9	9
ಗಾಳಿಯ ದಿಕ್ಕು (ಡಿಗ್ರಿ)	290	234	297	246	244

ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯ ಪ್ರಕಾರ ಮಾಯಸಂದ್ರ ಹಾಗೂ ಸುತ್ತಮುತ್ತ ಮುಂದಿನ ಐದು ದಿನಗಳು ಒಣ ಹವೆ ಮುಂದುವರೆಯಲಿದೆ. ದಿನದ ಗರಿಷ್ಠ ಉಷ್ಣಾಂಶವು 37-38°C ಮತ್ತು ಕನಿಷ್ಠ 21-24°C ಇರಲಿದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ 50-92 % ಇದ್ದು, ಮಧ್ಯಾಹ್ನ 13-22 % ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ 1-11 ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

- ✓ ಬರುವ ದಿನಗಳಲ್ಲಿ ಬಿಸಿಲಿನ ತಾಪ ಹೆಚ್ಚಾಗುವುದು, ತರಕಾರಿ ಹಾಗೂ ಇತರೆ ಬೆಳೆಗಳಿಗೆ ಸರಿಯಾದ ಪ್ರಮಾಣದಲ್ಲಿ ನೀರು ಒದಗಿಸಬೇಕು.
- ✓ **ಪೂರ್ವ ಮುಂಗಾರಿಗೆ ಈ ಕೆಳಗಿನ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ.**

  ರಾಗಿ: ಇಂಡಾಫ್–9, ಎಳ್ಳು : ನವಿಲೆ–1, ಟಿ–7, ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1

  ಹೆಸರು :ಪಿ.ಎಸ್–16, ಪಿ.ಡಿ.ಎಮ್–84, 178 , ಉದ್ದು: ಕರಗಾವ್–3, ಟಿ–9, ರಶ್ಮಿ
- ✓ ಕೋಳಿ ಸಾಕಣೆ, ಜಾನುವಾರು, ರೇಷ್ಮೆ ಕೃಷಿ ಬಿಸಿಲಿನ ತಾಪದಿಂದ ರಕ್ಷಿಸಲು ಸೂಕ್ತ ವ್ಯವಸ್ಥೆ ಕೊಡಬೇಕು.
- ✓ ಜಾನುವಾರು: ಬಿಸಿಲು ಹೆಚ್ಚಾಗಿರುವುದರಿಂದ ಹಸಿರು ಹುಲ್ಲಿನ ಅಭಾವ ಕಂದುಬರುತ್ತದೆ ಆದುದರಿಂದ ಹಗೇವಿನಲ್ಲಿ ರಸಮೇವನ್ನು ತಯಾರಿಸಿ ದನಕರುಗಳಿಗೆ ಕೊಡಿ.
- ✓ ನೀರು ಬರಿದಾಗಿರುವ ಕೆರೆಗಳಲ್ಲಿ ಕೆರೆಗೋಡು ಮಣ್ಣನ್ನು ತೆಗೆದು ಭೂಮಿಗೆ ಸೇರಿಸುವುದರಿಂದ ಭೂಮಿಯ ಫಲವತ್ತತೆಯನ್ನು ಹೆಚ್ಚಿಸಬಹುದು
- ✓ ಏಪ್ರಿಲ್ ಮತ್ತು ಮೇ ತಿಂಗಳುಗಳಲ್ಲಿ ಮೊದಲನೆ ಬೆಳೆಯಾಗಿ ಅಲಸಂದೆ, ಎಳ್ಳು, ಉದ್ದು, ಹೆಸರು ಮೇ ತಿಂಗಳಿನಲ್ಲಿ ಬಿತ್ತ ಬಹುದಾದ ಇವುಗಳ ಬೇಸಾಯಕ್ಕೆ ಪರಿಕರಗಳ ಪೂರಕಗಳನ್ನು ಸಿದ್ಧತೆ ಮಾಡಿಕೊಳ್ಳಿ.
- ✓ ಮಾವು: ತೇವಾಂಶದ ರಕ್ಷಣೆಗೆ ಬೆಳೆಗಳ ಉಳಿಕೆ ಮತ್ತು ಕಳೆಗಳನ್ನು ಕತ್ತರಿಸಿ ಹೊದಿಕೆ ಮಾಡುವ್ಯದು.
- ✓ ಮಾವಿನ ಮರದ ಕೆಳಗೆ ಬೆಳೆದಿರುವ ಕಳೆಗಿಡಗಳನ್ನು ಕಡಿದುಹಾಕಿ ಸ್ವಚ್ಚಗೊಳಿಸಬೇಕು.

ಸಸ್ಯ ಸಂರಕ್ಷಣೆ:

- ✓ **ರಸ ಹೀರುವ ಕೀಟಗಳು:** ಇವುಗಳ ಹತೋಟಿಗೆ ಶೇ. ಳರಷ್ಟು ಬೇವಿನ ಕಷಾಯವನ್ನು ಸಿಂಪಡಿಸಬೇಕು ಅಥವಾ ಬೇವಿನ ಎಣ್ಣೆಯನ್ನು ಸಿಂಪಡಿಸಬೇಕು ಅಥವಾ ಇಮಿಡಕ್ಲೋಪ್ರಿಡ್ (0.5 ml/L) ಸಿಂಪಡಿಸಿ.

ನೋಡಲ್ ಅಧಿಕಾರಿ:

ಕೃಷಿ ಹವಾಮಾನ ವಿಭಾಗ

ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು